# All India Radio: Bangalore
# Regional Bulletin In Kannada
# 05.10.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

೧. ನಮ್ಮ ಮೆಟ್ರೋಗೆ 'ಬಸವ ಮೆಟ್ರೋ' ಹೆಸರು ನಾಮಕರಣಕ್ಕೆ ಕೇಂದ್ರಕ್ಕೆ ಶಿಫಾರಸ್ಸು - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯದಲ್ಲಿ ಈವರೆಗೆ ಶೇಕಡ ೭೦ರಷ್ಟು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪೂರ್ಣ

೩. ಕೆರೆಗಳ ಸಂರಕ್ಷಣೆ ಮೂಲಕ ಅಂತರ್ಜಲ ವೃದ್ಧಿ ; ರಾಜ್ಯ ಸರ್ಕಾರದಿಂದ ವೈಜ್ಞಾನಿಕ ಯೋಜನೆಗಳ ಜಾರಿ

೪. ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಅತಿವೃಷ್ಟಿ ; ಜನರ ಸಂಕಷ್ಟ ಪರಿಹಾರಕ್ಕೆ ಮುಂದಾಗುವಂತೆ ರಾಜ್ಯ ಸರ್ಕಾರಕ್ಕೆ ಬಿಜೆಪಿ ಒತ್ತಾಯ

*************

ನಮ್ಮ ಮೆಟ್ರೋಗೆ "ಬಸವ ಮೆಟ್ರೋ" ಎಂದು ನಾಮಕರಣ ಮಾಡುವ ಬಗ್ಗೆ ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಶ್ವಗುರು ಬಸವಣ್ಣ ಅವರನ್ನು ಕರ್ನಾಟಕ ಸಾಂಸ್ಕೃತಿ ರಾಯಭಾರಿ ಎಂದು ಘೋಷಿಸಿದ ವರ್ಷಾಚರಣೆ ಅಂಗವಾಗಿ ಬೆಂಗಳೂರಿನಲ್ಲಿಂದು ಆಯೋಜಿಸಲಾಗಿದ್ದ ಬಸವ ಸಂಸ್ಕೃತಿ ಅಭಿಯಾನ - ೨೦೨೫ ಸಮಾರೋಪ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ, ಮೆಟ್ರೋಗೆ ಹೆಸರು ನಾಮಕರಣ ವಿಚಾರ ಕೇಂದ್ರಕ್ಕೆ ಸಂಬಂಧಿಸಿದ್ದು, ರಾಜ್ಯದಿಂದ ಶೀಘ್ರದಲ್ಲೇ ಶಿಫಾರಸ್ಸು ಮಾಡಲಾಗುವುದು ಎಂದರು. ಸ್ವಾತಂತ್ರ್ಯ, ಸಮಾನತೆ, ಬ್ರಾತೃತ್ವ ಸಂವಿಧಾನದ ಆಶಯವಾಗಿದ್ದು, ವರ್ಗ ರಹಿತ ಬ್ರಾತೃತ್ವದ ಸಮಾಜ ನಿರ್ಮಾಣಕ್ಕೆ ಮುಂದಾಗಿದ್ದ ಬಸವಣ್ಣನವರು ಸಾರ್ವಕಾಲೀಕ ಪ್ರಸ್ತುತವಾಗಿದ್ದು, ಮುಂದಿನ ವರ್ಷ ವಚನ ವಿಶ್ವ ವಿದ್ಯಾಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಬಸವಣ್ಣನವರ ಆಶಯಗಳನ್ನು ಈಡೇರಿಸುವ ಉದ್ದೇಶದಿಂದ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸುವ ಮೂಲಕ ಇಡೀ ಸರ್ಕಾರ ಬಸವಣ್ಣನವರಿಗೆ ಗೌರವ ಸೂಚಿಸಿದೆ ಎಂದು ತಿಳಿಸಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( ೨೩ ಸೆಕೆಂಡುಗಳು)**

*************

ರಾಜ್ಯದಲ್ಲಿ ಇಲ್ಲಿಯವರೆಗೆ ಶೇಕಡ ೭೦ರಷ್ಟು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪೂರ್ಣಗೊಂಡಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಧಾರವಾಡದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜದಲ್ಲಿ ಬಡವರ ಸ್ಥಿತಿಗತಿ ಕುರಿತು ಮಾಹಿತಿ ಸಂಗ್ರಹಿಸಲು ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದೆ. ಇನ್ನು ಶೇಕಡ ೩೦ರಷ್ಟು ಸಮೀಕ್ಷೆ ಬಾಕಿ ಉಳಿದಿದೆ ಎಂದು ಹೇಳಿದ್ದಾರೆ.

ಧ್ವನಿ : ಸಂತೋಷ್ ಲಾಡ್ ( ೨೭ ಸೆಕೆಂಡುಗಳು)

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲು ನಾಡಿದ್ದು ಕೊನೆಯ ದಿನವಾಗಿದೆ. ಬಹುತೇಕ ಎಲ್ಲಾ ಜಿಲ್ಲೆಗಳಲ್ಲಿ ಶಿಕ್ಷಕರು ಸಮೀಕ್ಷೆ ಕಾರ್ಯದಲ್ಲಿ ತೊಡಗಿದ್ದು, ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿದೆ.

**************

ಕೆರೆಗಳ ಸಂರಕ್ಷಣೆ ಮೂಲಕ ಅಂತರ್ಜಲ ವೃದ್ಧಿಗಾಗಿ ವೈಜ್ಞಾನಿಕ ಯೋಜನೆಗಳನ್ನು ರಾಜ್ಯ ಸರ್ಕಾರ ರೂಪಿಸಿದೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ. ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ತಾಯಮ್ಮ ಕೆರೆ ಅಭಿವೃದ್ಧಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಅಂತರ್ಜಲ ಸಮೃದ್ಧಿಗಾಗಿ ಎಲ್ಲಾ ಕೆರೆಗಳ ಸಂರಕ್ಷಣೆ ನಮ್ಮ ಜವಾಬ್ದಾರಿಯಾಗಿದೆ ಎಂದರು. ಕೆರೆ ಒತ್ತುವರಿ ಮಾಡದಂತೆ ಕೆರೆ ವ್ಯಾಪ್ತಿಯ ಭೂಮಿಯನ್ನು ಸಂರಕ್ಷಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

**************

ಐಫೋನ್ ಮತ್ತು ಅದರ ಬಿಡಿಭಾಗಗಳ ತಯಾರಿಕೆಗೆ ಹೆಸರಾಗಿರುವ ಫಾಕ್ಸ್‌ಕಾನ್ ಕಂಪನಿಯ ಭಾರತದ ಮುಖ್ಯಸ್ಥ ರಾಬರ್ಟ್ ವೊ ಅವರು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಚಿವರಾದ ಎಂ.ಬಿ. ಪಾಟೀಲ್, ಪ್ರಿಯಾಂಕ್ ಖರ್ಗೆ, ಶರಣಪ್ರಕಾಶ್ ಪಾಟೀಲ್, ಕೆ.ಹೆಚ್. ಮುನಿಯಪ್ಪ ಹಾಗೂ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಗುಂಜನ್ ಕೃಷ್ಣ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

**************

ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕವಾಗಿ. ೬೦ ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗುತ್ತಿದ್ದು, ಈ ಯೋಜನೆಗಳಿಂದ ಜನರ ಜೀವನ ಪರಿಸ್ಥಿತಿ ಸುಧಾರಿಸುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹುಬ್ಬಳ್ಳಿಯಲ್ಲಿಂದು ತಿಳಿಸಿದ್ದಾರೆ. ಹುಬ್ಬಳ್ಳಿಯ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ನಂತರ ಅರ್ಹ ಫಲಾನುಭವಿಗಳಿಗೆ ಉಚಿತ ಹೊಲಿಗೆ ಯಂತ್ರ ವಿತರಿಸಿ ಮಾತನಾಡಿದ ಅವರು ೫೦೦ ಕೋಟಿಗೂ ಹೆಚ್ಚು ಮಹಿಳೆಯರು ಶಕ್ತಿ ಯೋಜನೆಯಡಿ ಉಚಿತ ಪ್ರಯಾಣ ಮಾಡಿದ್ದು, ಈ ಮೂಲಕ ವಿಶ್ವ ದಾಖಲೆಯನ್ನು ನಿರ್ಮಿಸಿದ್ದಾರೆ. ಪಂಚ ಖಾತರಿ ಯೋಜನೆಗಳು ನಿರೀಕ್ಷೆಗೂ ಮೀರಿ ಯಶಸ್ವಿಯಾಗಿವೆ ಎಂದು ತಿಳಿಸಿದರು.

**************

ರಾಜ್ಯದಲ್ಲಿ ನಡೆಯುತ್ತಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಗೊಂದಲದ ಅವ್ಯವಸ್ಥೆಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಆರೋಪಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೂರ್ವ ತಯಾರಿ ಇಲ್ಲದೆ ನಡೆಯುತ್ತಿರುವ ಈ ಸಮೀಕ್ಷೆ ಆತುರದಿಂದ ತೆಗೆದುಕೊಂಡ ನಿರ್ಧಾರವಾಗಿದ್ದು, ರಾಜ್ಯದೆಲ್ಲೆಡೆ ಟೀಕೆಗಳು ವ್ಯಕ್ತವಾಗುತ್ತಿವೆ ಎಂದರು. ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಅತಿವೃಷ್ಟಿ ಉಂಟಾಗಿದ್ದು, ಹಲವು ಪ್ರದೇಶಗಳಲ್ಲಿ ಬೆಳೆ

ನಾಶವಾಗಿ, ಜನರು ಸೂರು ಕಳೆದುಕೊಂಡು ನಿರಾಶ್ರಿತರಾಗಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಅವರ ಸಂಕಷ್ಟಗಳಿಗೆ ಸ್ಪಂದಿಸಲು ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

**************

ಕನ್ನಡ ಜಾನಪದ ಸಾಹಿತ್ಯದ ಸಂರಕ್ಷಣೆ ಮತ್ತು ಪ್ರಚಾರಕ್ಕೆ ಬೆಂಬಲ ಸೂಚಿಸುವ ಉದ್ದೇಶದಿಂದ ಬಾಗಲಕೋಟೆ ಜಿಲ್ಲೆಯ ಲೋಕಾಪೂರ ಪಟ್ಟಣದಲ್ಲಿ  ಮುಧೋಳ ತಾಲೂಕಿನ ಪ್ರಥಮ ಕನ್ನಡ ಜಾನಪದ ಮಹಿಳಾ ಸಮ್ಮೇಳನ ಇಂದು ನಡೆಯಿತು.  ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಮಾತನಾಡಿ, ಜನಪದ ಸಾಹಿತ್ಯವು ಮಹಿಳಾ ಸಬಲೀಕರಣಕ್ಕೆ ಅಪಾರ ಕೊಡುಗೆ ನೀಡಿದೆ. ಗ್ರಾಮೀಣ ಜಾನಪದ ಕಲೆಗಳು ಮತ್ತು ಸಾಹಿತ್ಯ ಮಹಿಳಾ ಶಕ್ತಿಯನ್ನು ಗುರುತಿಸುವ ಮಾರ್ಗವಾಗಿದೆ ಎಂದರು. ಲೋಕಾಪೂರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕಿವಡಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**************

ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ಸಂಗ್ರಹ ಮಾಡಿರುವ ರಾಜ್ಯದ ೩೧ ಜಿಲ್ಲೆಗಳ ಪೈಕಿ ಚಿಕ್ಕಬಳ್ಳಾಪುರ ಜಿಲ್ಲೆ ೧೬ ಕೋಟಿ ೨೯ ಲಕ್ಷ ರೂಪಾಯಿ ಸಂಗ್ರಹಿಸುವ ಮೂಲಕ  ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ ೧೫೭ ಗ್ರಾಮ ಪಂಚಾಯಿತಿಗಳಿದ್ದು, ೨೦೨೫ ರ ಏಪ್ರಿಲ್ ನಿಂದ ಸೆಪ್ಟೆಂಬರ್ ವರೆಗಿನ ತೆರಿಗೆ ಸಂಗ್ರಹ ಗುರಿ ಸಾಧನೆ ಪಟ್ಟಿಯಲ್ಲಿ ಅಗ್ರ ಸ್ಥಾನದಲ್ಲಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಈ ತೆರಿಗೆ ಸಂಗ್ರಹ ಸಹಕಾರಿಯಾಗಿದೆ.  ತೆರಿಗೆ ಸಂಗ್ರಹದಲ್ಲಿ ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಮತ್ತು ಮಂಡ್ಯ ಜಿಲ್ಲೆಗಳು ಕ್ರಮವಾಗಿ ಮೊದಲ ಐದು ಸ್ಥಾನಗಳಲ್ಲಿವೆ. ೨೮ ಜಿಲ್ಲೆಗಳು ಶೇಕಡ ೫೦ ಕ್ಕಿಂತಲೂ ಕಡಿಮೆ ತೆರಿಗೆ ಸಂಗ್ರಹ ಮಾಡಿವೆ.  ತೆರಿಗೆ ಪಾವತಿಯ ಪ್ರಕ್ರಿಯೆಯನ್ನು ಅತ್ಯಂತ ಸರಳ ಮತ್ತು ಸುಲಭಗೊಳಿಸುವ ಪರಿಣಾಮ ತೆರಿಗೆ ಸಂಗ್ರಹದಲ್ಲಿ ಉತ್ತಮ ಸಾಧನೆ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ನವೀನ್ ಭಟ್ ತಿಳಿಸಿದ್ದಾರೆ.

**************

’ವೀರ್ ಪರಿವಾರ್ ಸಹಾಯತಾ ಯೋಜನೆ’ ೨೦೨೫ ರ ಅಡಿಯಲ್ಲಿ ಶಿವಮೊಗ್ಗದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯಲ್ಲಿ ಉಚಿತ ಕಾನೂನು ನೆರವು ಸೇವಾ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ. ರಕ್ಷಣಾ ಇಲಾಖೆಯ ಸಿಬ್ಬಂದಿಗಳು, ವೀರ ನಾರಿಯರು, ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ಕಾನೂನು ಸಮಸ್ಯೆಗಳಿಗೆ ಉಚಿತ ನೆರವು ನೀಡುವ ಯೋಜನೆ ಇದಾಗಿದೆ. ಈ ಯೋಜನೆಯ ಸುಗಮ ಅನು?ನಕ್ಕಾಗಿ ನ್ಯಾಯಾಧೀಶ ಅಡ್ವಕೇಟ್ ಜನರಲ್ ಇಲಾಖೆಯಿಂದ ಆನ್‌ಲೈನ್ ತರಬೇತಿ ನೀಡಲಾಗುವುದು ಎಂದು ಡಾ.ಹಿರೇಮಠ ತಿಳಿಸಿದ್ದಾರೆ.

**************

ದಕ್ಷಿಣ ಕನ್ನಡ ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ  ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಇದೇ ೧೦ ರಂದು ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್  ಅವರ

ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್ ಅವರು ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಿದ್ದಾರೆ ಎಂದು ಕಾರ್ಮಿಕ ಅಧಿಕಾರಿಗಳು ಹೇಳಿಕೆಯಲ್ಲಿ ತಿಳಿಸಿದ್ದಾರೆ.

**************